## 15. ಬೆಂಗಳೂರು ಸೇರಿ ಧಾರವಾಡ, ದಕ್ಷಿಣ ಕನ್ನಡ, ಬೆಳಗಾವಿ ಜಿಲ್ಲೆ ಕೆಲಭಾಗಗಳಲ್ಲಿ ಲಾಕ್‌ಡೌನ್ ಜಾರಿ

ರಾಜ್ಯದಲ್ಲಿ ಹೆಚ್ಚುತ್ತಿರುವ ಕೊರೋನಾ ಸೋಂಕು ತಡೆವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ರಾಜ್ಯಾದ್ಯಾಂತ ರಾತ್ರಿ ಎಂಟು ಗಂಟೆಯಿಂದ ಲಾಕ್‌ಡೌನ್ ಜಾರಿಗೆ ನಿರ್ಧರಿಸಿದ್ದು, ಜುಲೈ 22 ಬೆಳಗಿನ ಜಾವ ಐದು ಗಂಟೆಯವರೆಗೆ ಜಾರಿಯಲ್ಲಿ ಇರಲಿದೆ. ಜಿಲ್ಲಾ ಮಟ್ಟದಲ್ಲಿ ಲಾಕ್‌ಡೌನ್ ಜಾರಿಗೊಳಿಸುವ ಜವಾಬ್ದಾರಿಯನ್ನು ಆಯಾ ಜಿಲ್ಲಾಧಿಕಾರಿಗಳಿಗೆ ವಹಿಸಲಾಗಿದ್ದು, ಆಯಾ ಜಿಲ್ಲಾಧಿಕಾರಿಗಳಿಗೆ ಪರಿಸ್ಥಿತಿ ಅವಲೋಕಿಸಿ ಕ್ರಮ ಜರುಗಿಸುವಂತೆ ಸೂಚಿಸಲಾಗಿದೆ. ಈಗಾಗಲೇ ದಕ್ಷಿಣ ಕನ್ನಡ, ಧಾರವಾಡ ಭಾಗಶ:, ಬೆಳಗಾವಿ, ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ರಾತ್ರಿಯಿಂದ ಲಾಕ್‌ಡೌನ್ ಜಾರಿಗೆ ಬರಲಿದೆ. ಈಗಾಗಲೇ ಸ್ವಯಂಪ್ರೇರಣೆಯಿಂದ ಹಲವಾರು ಪ್ರದೇಶಗಳಲ್ಲಿ ಲಾಕ್‌ಡೌನ್ ಘೋಷಿಸಲಾಗಿದೆ. ಇದು ಕಟ್ಟಕಡೆಯ ಲಾಕ್‌ಡೌನ್ ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಆರೋಗ್ಯ ಕಾರ್ಯಪಡೆ ಸಭೆಯಲ್ಲಿ ಸ್ಪಷ್ಟಪಡಿಸಿ ಲಾಕ್‌ಡೌನ್ ವಿಸ್ತರಣೆ ಆಗುವ ವದಂತಿಗಳನ್ನು ನಂಬಬೇಡಿ ಎಂದು ತಿಳಿ ಹೇಳಿದ್ದಾರೆ.

ತುರ್ತು ಸೇವೆ, ವಿದ್ಯುತ್, ನೀರು, ನೈರ್ಮಲ್ಯಗಳಿಗೆ ವಿನಾಯ್ತಿ ನೀಡಲಾಗಿದೆ. ವಿಕಾಸಸೌಧ, ವಿಧಾನಸೌಧ ಮತ್ತು ಬಹುಮಹಡಿಗಳಲ್ಲಿನ ಸರ್ಕಾರಿ ಕಚೇರಿಗಳಲ್ಲಿ ಶೇ.50ರಷ್ಟು ಸಿಬ್ಬಂದಿಯೊಂದಿಗೆ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ. ನ್ಯಾಯಾಲಯಗಳ ಕಾರ್ಯನಿರ್ವಹಣೆ ಬಗ್ಗೆ ಉಚ್ಚ ನ್ಯಾಯಾಲಯ ನಿರ್ಧರಿಸಲಿದೆ.

ಕೇಂದ್ರ ಸರ್ಕಾರಿ, ಸ್ವಾಯತ್ತ ಸಂಸ್ಥೆಗಳು, ಸಾರ್ವಜನಿಕ ವಲಯದ ಸಂಸ್ಥೆಗಳಿಗೆ ರಜೆ ಘೋಷಿಸಲಾಗಿದೆ. ವಿಮಾನ ನಿಲ್ದಾಣ, ಬ್ಯಾಂಕುಗಳು, ಭಾರತೀಯ ರಿಸರ್ವ್ ಬ್ಯಾಂಕ್ ಕನಿಷ್ಠ ಸಿಬ್ಬಂದಿಯ ಹಾಜರಾತಿಯೊಂದಿಗೆ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ.

ಪಶು ಚಿಕಿತ್ಸಾಲಯ, ಆರೋಗ್ಯ ಸೇವೆಗಳು, ವೈದ್ಯಕೀಯ ಕ್ಷೇತ್ರಕ್ಕೆ ಸಂಬಂಧಿಸಿದ ಎಲ್ಲ ರೀತಿಯ ವಹಿವಾಟಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಕಂಟೈನ್‌ಮೆಂಟ್ ಪ್ರದೇಶ ವ್ಯಾಪ್ತಿ ಹೊರತುಪಡಿಸಿ ಉಳಿದೆಡೆ ಕೃಷಿ ಚಟುವಟಿಕೆ, ಕೃಷಿ ಉತ್ಪನ್ನ, ವ್ಯಾಪಾರ ಮತ್ತು ಸಾಗಾಣಿಕೆ, ರಸಗೊಬ್ಬರ ಮಾರಾಟ, ಕೊಯ್ಲು ತೋಟಗಾರಿಕೆ ಚಟುವಟಿಕೆ, ಮೀನುಗಾರಿಕೆ, ಪಶು ಸಂಗೋಪನೆ, ಕೋಳಿ, ಜಾನುವಾರು ಸಾಗಾಣಿಕೆಗಳಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಆರೈಕೆ ಸಂಸ್ಥೆಗಳು, ಪಿಂಚಣಿ ಸಂಬಂಧಿತ ಕಚೇರಿಗಳು, ಭವಿಷ್ಯನಿಧಿ ಸೇವೆಗಳು, ಸಾಮಾಜಿಕ ಭದ್ರತಾ ಕಾರ್ಯಕ್ರಮಗಳಿಗೆ ಸಂಬಂಧಿಸಿದ ವಿಷಯಗಳು, ಅಂಗನವಾಡಿ, ಮನೆ ಬಾಗಿಲಿಗೆ ಆಹಾರ ಪೂರೈಕೆ ಮೊದಲಾದ ಚಟುವಟಿಕೆಗಳು ನಿರಂತರವಾಗಿರಲಿವೆ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಈಗಾಗಲೇ ನಿಗದಿಪಡಿಸಿದ ವೇಳಾಪಟ್ಟಿಯಂತೆ ರೈಲು, ವಿಮಾನಗಳು ಸಂಚರಿಸಲಿದ್ದು ನಿಲ್ದಾಣಕ್ಕೆ ತಲುಪಲು ಆಟೋ, ಟ್ಯಾಕ್ಸಿ ಮೂಲಕ ಸಂಚರಿಸಲೂ ಅವಕಾಶ ನೀಡಲಾಗಿದೆ.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ:14.07.2020